# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ದಿನಪತ್ರಿಕೆ ವಿತರಿಸುವ ಕಾರ್ಮಿಕರಿಗೆ ಅಪಘಾತ ಪರಿಹಾರ ಹಾಗೂ ವೈದ್ಯಕೀಯ ಸೌಲಭ್ಯ ಒದಗಿಸುವ "ಕರ್ನಾಟಕ ರಾಜ್ಯ ದಿನಪತ್ರಿಕೆ ವಿತರಣಾ ಕಾರ್ಮಿಕರ ಅಪಘಾತ ಪರಿಹಾರ ಮತ್ತು ವೈದ್ಯಕೀಯ ಸೌಲಭ್ಯ ಯೋಜನೆ"ಯನ್ನು ಅನುಷ್ಠಾನಗೊಳಿಸುವ ಬಗ್ಗೆ.

ಓದಲಾಗಿದೆ:- ಕಾರ್ಮಿಕ ಆಯುಕ್ತರ ಪ್ರಸ್ತಾವನೆ ಸಂಖ್ಯೆ: ಅಸಂಕಾ/ ಅಂ.ಕಾ.ಸಾ.ಭ.ಸೌ/ ಸಿಆರ್-03/202-23, ದಿನಾಂಕ: 19/09/2023.

******

**ಪ್ರಸ್ತಾವನೆ:**

ಮೇಲೆ ಓದಲಾದ ಕಾರ್ಮಿಕ ಆಯುಕ್ತರು, ಬೆಂಗಳೂರು ಅವರು ಸಲ್ಲಿಸಿರುವ ಪ್ರಸ್ತಾವನೆಯಲ್ಲಿ ಅಸಂಘಟಿತ ವಲಯದ ವ್ಯಾಪ್ತಿಯಲ್ಲಿ ಬರುವ ದಿನಪತ್ರಿಕೆ ವಿತರಿಸುವ ಕಾರ್ಮಿಕರು ಅರೆಕಾಲಿಕ ವೃತ್ತಿ ನಿರ್ವಹಿಸುತ್ತಿದ್ದು, ಪ್ರತಿದಿನ ಪತ್ರಿಕೆಗಳನ್ನು ವಿತರಿಸುತ್ತಾರೆ. ಈ ಕಾರ್ಮಿಕರು ಅಸಂಘಟಿತ ಕಾರ್ಮಿಕ ವಲಯಕ್ಕೆ ಸೇರಿದ್ದು, ಕಾರ್ಮಿಕ ಕಾನೂನುಗಳಡಿ ನಿಗದಿಪಡಿಸಿರುವ ಸಾಮಾಜಿಕ ಭದ್ರತಾ ಸೌಲಭ್ಯಗಳಿಂದ ವಂಚಿತರಾಗಿರುತ್ತಾರೆ. ಇಂತಹ ಅಸಂಘಟಿತ ಕಾರ್ಮಿಕರಿಗೆ ಕಲ್ಯಾಣ ಮತ್ತು ಸಾಮಾಜಿಕ ಭದ್ರತೆ ಒದಗಿಸುವ ಉದ್ದೇಶದಿಂದ ಕೇಂದ್ರ ಸರ್ಕಾರವು 2008ರಲ್ಲಿ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಕಾಯ್ದೆಯನ್ನು ರೂಪಿಸಿದ್ದು, ಈ ಕಾಯ್ದೆಗೆ 2006ರಲ್ಲಿ ಕರ್ನಾಟಕ ನಿಯಮಗಳು ರೂಪಿತವಾಗಿದ್ದು, ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯ ಮೂಲಕ ಕಾರ್ಯರೂಪಗೊಂಡಿರುತ್ತದೆ. ದಿನಪತ್ರಿಕೆ ವಿತರಿಸುವ ಕಾರ್ಮಿಕರಲ್ಲಿ ಬಹುತೇಕರು ದ್ವಿಚಕ್ರ ವಾಹನಗಳನ್ನು ಬಳಸುತ್ತಿದ್ದು, ಅಂತಹ ಸಂದರ್ಭದಲ್ಲಿ ಅಪಘಾತಕ್ಕೆ ತುತ್ತಾಗುವ ಸಾಧ್ಯತೆ ಹೆಚ್ಚಾಗಿರುತ್ತದೆ. ಅಪಘಾತದಿಂದ ಮರಣ/ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ್ದಲ್ಲಿ ಅವರು ಹಾಗೂ ಅವರ ಅವಲಂಬಿತರು ಆರ್ಥಿಕ ಸಂಕಷ್ಟಕ್ಕೆ ಒಳಗಾಗುತ್ತಾರೆ. ಅಂತಹ ಸಂದರ್ಭದಲ್ಲಿ ದಿನಪತ್ರಿಕೆ ವಿತರಿಸುವ ಕಾರ್ಮಿಕರ/ಅವರ ಅವಲಂಬಿತರಿಗೆ ಸಾಮಾಜಿಕ ಭದ್ರತೆ ಒದಗಿಸುವುದು ಸರ್ಕಾರದ ಹೊಣೆಗಾರಿಕೆಯಾಗಿದ್ದು, ಅಪಘಾತ ಪರಿಹಾರ ಮತ್ತು ವೈದ್ಯಕೀಯ ಸೌಲಭ್ಯ ಒದಗಿಸುವ ಮೂಲಕ ಸಂಕಷ್ಟದಿಂದ ಮುಕ್ತಗೊಳಿಸಬಹುದಾಗಿದೆ ಎಂದು ತಿಳಿಸುತ್ತಾ ಯೋಜನೆಯ ಜಾರಿಗಾಗಿ ಸೂಕ್ತ ಸರ್ಕಾರಿ ಆದೇಶ ಹಾಗೂ ಮಾರ್ಗಸೂಚಿ ಹೊರಡಿಸುವಂತೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿ ಈ ಮುಂದಿನಂತೆ ಆದೇಶ ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕಾಇ 422 ಎಲ್ಇಟಿ 2023, ದಿನಾಂಕ: 22/11/2023**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ದಿನಪತ್ರಿಕೆ ವಿತರಿಸುವ ಕಾರ್ಮಿಕರುಗಳಿಗೆ ಸಾಮಾಜಿಕ ಭದ್ರತೆಯನ್ನು ಒದಗಿಸುವ ದೃಷ್ಟಿಯಿಂದ, ಎರಡು ಲಕ್ಷ ರೂ.ಗಳ ಅಪಘಾತ ಪರಿಹಾರ ಸೌಲಭ್ಯ ಹಾಗೂ ಒಂದು ಲಕ್ಷ ರೂ.ಗಳವರೆಗೆ ವೈದ್ಯಕೀಯ ಸೌಲಭ್ಯವನ್ನು ಒದಗಿಸುವ, "ಕರ್ನಾಟಕ ರಾಜ್ಯ ದಿನಪತ್ರಿಕೆ ವಿತರಣಾ ಕಾರ್ಮಿಕರ ಅಪಘಾತ ಪರಿಹಾರ ಮತ್ತು

ವೈದ್ಯಕೀಯ ಸೌಲಭ್ಯ ಯೋಜನೆ"ಯನ್ನು ಅನುಬಂಧದಲ್ಲಿ ಲಗತ್ತಿಸಲಾದ ಮಾರ್ಗಸೂಚಿಗಳನ್ವಯ, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯ ಮೂಲಕ ಜಾರಿಗೊಳಿಸಲು ಅನುಮೋದಿಸಿ ತಕ್ಷಣದಿಂದ ಜಾರಿಗೆ ಬರುವಂತೆ ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Suma 21/11/2023

**(ಸುಮ . ಎಸ್)**
ಸರ್ಕಾರದ ಅಧೀನ ಕಾರ್ಯದರ್ಶಿ
ಕಾರ್ಮಿಕ ಇಲಾಖೆ.

**<u>ಇವರಿಗೆ:-</u>**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು- ಅಧಿಸೂಚನೆಯನ್ನು ಇ-ರಾಜ್ಯಪತ್ರದಲ್ಲಿ ಪ್ರಕಟಿಸಲು ಕೋರಿದೆ.

**<u>ಪ್ರತಿಗಳು:</u>**

1. ಪ್ರಧಾನ ಮಹಾಲೇಖಪಾಲ (ಕರ್ನಾಟಕ), ನೂತನ ಕಟ್ಟಡ, ಲೆಕ್ಕಪರಿಶೋಧನಾ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-1.
2. ಆಯುಕ್ತರು, ಕಾರ್ಮಿಕ ಇಲಾಖೆ, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು.
3. ಜಂಟಿ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ, ಬನ್ನೇರುಘಟ್ಟ ರಸ್ತೆ, ಬೆಂಗಳೂರು.
4. ಮಾನ್ಯ ಕಾರ್ಮಿಕ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕಾರ್ಮಿಕ ಇಲಾಖೆ, ವಿಕಾಸ ಸೌಧ, ಬೆಂಗಳೂರು.
6. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಕಾರ್ಮಿಕ ಇಲಾಖೆ, ಬೆಂಗಳೂರು
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

## "ಕರ್ನಾಟಕ ರಾಜ್ಯ ದಿನಪತ್ರಿಕೆ ವಿತರಣಾ ಕಾರ್ಮಿಕರ ಅಪಘಾತ ಪರಿಹಾರ ಮತ್ತು ವೈದ್ಯಕೀಯ ಸೌಲಭ್ಯ ಯೋಜನೆ" ಯ ಮಾರ್ಗಸೂಚಿ

### 1. ಉದ್ದೇಶ:

ಅಸಂಘಟಿತ ವಲಯದ ವ್ಯಾಪ್ತಿಯಲ್ಲಿ ಬರುವ ದಿನಪತ್ರಿಕೆ ವಿತರಿಸುವ ಕಾರ್ಮಿಕರು ಅರೆಕಾಲಿಕ ವೃತ್ತಿ ನಿರ್ವಹಿಸುತ್ತಿದ್ದು, ಪ್ರತಿನಿತ್ಯ ಪತ್ರಿಕೆಗಳನ್ನು ವಿತರಿಸುತ್ತಾರೆ. ಈ ಕಾರ್ಮಿಕರು ಅಸಂಘಟಿತ ಕಾರ್ಮಿಕ ವಲಯಕ್ಕೆ ಸೇರಿದ್ದು, ಕಾರ್ಮಿಕ ಕಾನೂನುಗಳಡಿ ನಿಗದಿಪಡಿಸಿರುವ ಸಾಮಾಜಿಕ ಭದ್ರತಾ ಸೌಲಭ್ಯಗಳಿಂದ ವಂಚಿತರಾಗಿರುತ್ತಾರೆ. ಇಂತಹ ಅಸಂಘಟಿತ ಕಾರ್ಮಿಕರಿಗೆ ಕಲ್ಯಾಣ ಮತ್ತು ಸಾಮಾಜಿಕ ಭದ್ರತೆ ಒದಗಿಸುವ ಉದ್ದೇಶದಿಂದ ಕೇಂದ್ರ ಸರ್ಕಾರವು 2008 ರಲ್ಲಿ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಕಾಯ್ದೆಯನ್ನು ರೂಪಿಸಿದ್ದು, ಈ ಕಾಯ್ದೆಗೆ 2009 ರಲ್ಲಿ ಕರ್ನಾಟಕ ನಿಯಮಗಳು ರೂಪಿತವಾಗಿದ್ದು, ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯ ಮೂಲಕ ಕಾರ್ಯರೂಪಗೊಂಡಿರುತ್ತದೆ. ದಿನಪತ್ರಿಕೆ ವಿತರಿಸುವ ಕಾರ್ಮಿಕರಲ್ಲಿ ಬಹುತೇಕರು ದ್ವಿಚಕ್ರ ವಾಹನಗಳನ್ನು ಬಳಸುತ್ತಿದ್ದು, ಅಂತಹ ಸಂದರ್ಭದಲ್ಲಿ ಅಪಘಾತಕ್ಕೆ ತುತ್ತಾಗುವ ಸಾಧ್ಯತೆ ಹೆಚ್ಚಾಗಿರುತ್ತದೆ. ಅಪಘಾತದಿಂದ ಮರಣ/ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ್ದಲ್ಲಿ ಅವರು ಹಾಗೂ ಅವರ ಅವಲಂಬಿತರು ಆರ್ಥಿಕ ಸಂಕಷ್ಟಕ್ಕೆ ಒಳಗಾಗುತ್ತಾರೆ. ಅಂತಹ ಸಂದರ್ಭದಲ್ಲಿ ದಿನಪತ್ರಿಕೆ ವಿತರಿಸುವ ಕಾರ್ಮಿಕರ/ಅವರ ಅವಲಂಬಿತರಿಗೆ ಸಾಮಾಜಿಕ ಭದ್ರತೆ ಒದಗಿಸುವುದು ಸರ್ಕಾರದ ಹೊಣೆಗಾರಿಕೆಯಾಗಿದ್ದು, ಸೂಕ್ತ ಪರಿಹಾರ ಸೌಲಭ್ಯ ಒದಗಿಸುವ ಮೂಲಕ ಸಂಕಷ್ಟದಿಂದ ಮುಕ್ತಗೊಳಿಸಲು ಉದ್ದೇಶಿಸಲಾಗಿದೆ.

ಆದ್ದರಿಂದ, ದಿನಪತ್ರಿಕೆ ವಿತರಿಸುವ ಕಾರ್ಮಿಕರಿಗೆ ಅಪಘಾತ ಪರಿಹಾರ ಸೌಲಭ್ಯ ಹಾಗೂ ವೈದ್ಯಕೀಯ ಸೌಲಭ್ಯ ಒದಗಿಸಲು ಈ ಕೆಳಕಂಡಂತೆ ಯೋಜನೆಯನ್ನು ರೂಪಿಸಲಾಗಿದೆ.

### 2. ಯೋಜನೆಯ ಶೀರ್ಷಿಕೆ:

ಈ ಯೋಜನೆಯನ್ನು "ಕರ್ನಾಟಕ ರಾಜ್ಯ ದಿನಪತ್ರಿಕೆ ವಿತರಣಾ ಕಾರ್ಮಿಕರ ಅಪಘಾತ ಪರಿಹಾರ ಮತ್ತು ವೈದ್ಯಕೀಯ ಸೌಲಭ್ಯ ಯೋಜನೆ" ಎಂಬುದಾಗಿ ಕರೆಯುವುದು.

### 3. ಯೋಜನೆಯ ವ್ಯಾಪ್ತಿ ಹಾಗೂ ಪ್ರಾರಂಭ:

ಅ) ಇದು ಅಪಘಾತ ಪರಿಹಾರ/ವೈದ್ಯಕೀಯ ಸೌಲಭ್ಯ ಅಥವಾ ಎರಡೂ ಸೌಲಭ್ಯಗಳನ್ನು ಒಳಗೊಂಡಿರುತ್ತದೆ.

ಆ) ಇದು ಸಂಪೂರ್ಣ ಕರ್ನಾಟಕ ರಾಜ್ಯಕ್ಕೆ ಅನ್ವಯಿಸುತ್ತದೆ.

ಇ) ಈ ಯೋಜನೆಯು ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ ಅಧಿಕೃತ ಗೆಜೆಟ್‌ನಲ್ಲಿ ಪ್ರಕಟಿಸಿದ ದಿನಾಂಕದಿಂದ ಜಾರಿಗೆ ಬರುತ್ತದೆ.

### 4. ವ್ಯಾಖ್ಯಾನ:

ಈ ಯೋಜನೆಯಲ್ಲಿನ ವಿಷಯವು ಅನ್ಯತಾ ಅಗತ್ಯತೆಯನ್ನು ಹೊಂದಿರದಿದ್ದಲ್ಲಿ;

i. ಅಪಘಾತ (**Accident**): ಎಂದರೆ ಊಹಿಸಲಾರದ ಅನಿರೀಕ್ಷಿತ ಹಾಗೂ ಹಠಾತ್ ದುರ್ಘಟನೆಯಾಗಿದ್ದು, ಅಂಗವೈಕಲ್ಯ (ಭಾಗಶಃ ಅಥವಾ ಸಂಪೂರ್ಣ) ಅಥವಾ ಮರಣ ಸಂಭವಿಸುವ ಮೂಲಕ ಮಾನಸಿಕ, ಸಾಮಾಜಿಕ ಹಾಗೂ ಆರ್ಥಿಕ ದುಷ್ಪರಿಣಾಮ ಉಂಟುಮಾಡುವುದು.

ii. ಅಪಘಾತ ಪರಿಹಾರ (**Accidental Benefit**): ಎಂದರೆ, ಅಪಘಾತದಿಂದ ಉಂಟಾಗುವ ಮರಣ, ಸಂಪೂರ್ಣ ಶಾಶ್ವತ/ಭಾಗಶಃ ದುರ್ಬಲತೆಗೆ ಹಾಗೂ ತಾತ್ಕಾಲಿಕ ದುರ್ಬಲತೆಗೆ ಕಾನೂನುಬದ್ಧ ವಾರಸುದಾರರಿಗೆ ಅಥವಾ ಫಲಾನುಭವಿಗೆ ಪರಿಹಾರ ಮೊತ್ತವನ್ನು ಪಾವತಿಸುವುದು.

iii. ವೈದ್ಯಕೀಯ ಸೌಲಭ್ಯ (**Medical Benefit**): ಎಂದರೆ ನೋಂದಾಯಿತ ವ್ಯಕ್ತಿಯ ಮಾರಣಾಂತಿಕ ಕಾಯಿಲೆ ಅಥವಾ ಗಂಭೀರ ಅನಾರೋಗ್ಯಗಳಾದ, "ಹೃದ್ರೋಗ, ಕಿಡ್ನಿ ಜೋಡಣೆ, ಕ್ಯಾನ್ಸರ್ ಶಸ್ತ್ರಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮ ಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದ ತೊಂದರೆಗೆ ಸಂಬಂಧಿತ ಚಿಕಿತ್ಸೆ, ಮೂತ್ರ ಪಿಂಡದಲ್ಲಿನ ಕಲ್ಲು ತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತಸ್ರಾವದ ಚಿಕಿತ್ಸೆ, ಅಲ್ಸರ್ ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ, ಕಿಡ್ನಿ ಶಸ್ತ್ರಚಿಕಿತ್ಸೆ, ಇ.ಎನ್.ಟಿ. ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಸ್ಕೂಯಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆ ಮುರಿತ/ಡಿಸ್‌ಲೋಕೇಶನ್ ಚಿಕಿತ್ಸೆ"ಗಳಿಗೆ ಸಂಬಂಧಿಸಿದಂತೆ ಫಲಾನುಭವಿ ವ್ಯಕ್ತಿಗೆ ವೈದ್ಯಕೀಯ ಮೊತ್ತವನ್ನು ಪಾವತಿಸುವುದು.

iv. ಮಂಡಳಿ (**Board**): ಎಂದರೆ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ಬೆಂಗಳೂರು. ಈ ಮಂಡಳಿಯನ್ನು ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಕಾಯ್ದೆ 2008 ರ 6(1) ನೇ ಕಲಂ ಮೇರೆಗೆ ರಚಿಸಲಾಗಿದೆ.

v. ಫಲಾನುಭವಿ (**Beneficary**): ಎಂದರೆ ಕೇಂದ್ರ ಸರ್ಕಾರದ ಯೋಜನೆಯಾದ ಇ-ಶ್ರಮ್ ಪೋರ್ಟಲ್‌ನಲ್ಲಿ News Paper Boy ಎಂಬ ವರ್ಗದಡಿ ನೋಂದಾಯಿತ ದಿನಪತ್ರಿಕೆ ವಿತರಿಸುವ ಕಾರ್ಮಿಕ.

vi. ದಿನಪತ್ರಿಕೆ ವಿತರಿಸುವ ಕಾರ್ಮಿಕ (**Daily News Paper Distributing Worker**): ಎಂದರೆ ಪ್ರತಿನಿತ್ಯ ದಿನಪತ್ರಿಕೆ ವಿತರಿಸುವ ಕಾರ್ಮಿಕರು ಹಾಗೂ "ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಕಾಯ್ದೆ, 2008" ರ ಕಲಂ 2 (ಎಂ) ರನ್ವಯ ಷೆಡ್ಯೂಲ್-II ರಲ್ಲಿ ನಮೂದಿಸಿದ ಕಾಯ್ದೆಗಳ ವ್ಯಾಪ್ತಿಗೆ ಒಳಪಡದ ವ್ಯಕ್ತಿ/ನೌಕರ.

vii. ಕುಟುಂಬ (**Family**): ಎಂದರೆ ಕಾನೂನುಬದ್ಧ ವಾರಸುದಾರರಾದ ಗಂಡ, ಹೆಂಡತಿ, ಮಕ್ಕಳು ದತ್ತು ಮಕ್ಕಳು, ಸಂಪೂರ್ಣ ಅವಲಂಬಿತ ಪಾಲಕರು, ಸಂಪೂರ್ಣ ಅವಲಂಬಿತರಾದ ಅವಿವಾಹಿತ ಅಥವಾ ವಿಧವಾ ಹೆಣ್ಣು ಮಕ್ಕಳು ಹಾಗೂ ಅವಿವಾಹಿತ ಸೋದರಿಯರು.

viii. ಸರ್ಕಾರ (**Government**) : ಎಂದರೆ ಕರ್ನಾಟಕ ರಾಜ್ಯ ಸರ್ಕಾರ.

**5. ಅರ್ಹತೆಗಳು:-**

i. ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು.

ii. ಅರ್ಜಿದಾರರು16 ರಿಂದ 59 ವರ್ಷದವರಾಗಿರಬೇಕು.

iii. ಕೇಂದ್ರ ಸರ್ಕಾರದ ಇ-ಶ್ರಮ್ ಪೋರ್ಟಲ್‌ನಲ್ಲಿ News Paper Boy ಎಂಬ ವರ್ಗದಡಿ ನೋಂದಾಯಿತರಾಗಿ, ಪತ್ರಿಕೆ ವಿತರಣಾ ಕಾರ್ಯದಲ್ಲಿ ಸಕ್ರಿಯನಾಗಿರಬೇಕು.

iv. ಆದಾಯ ತೆರಿಗೆ ಪಾವತಿದಾರರಾಗಿರಬಾರದು.

v. ಇ.ಎಸ್.ಐ ಮತ್ತು ಇ.ಪಿ.ಎಫ್ ಸೌಲಭ್ಯ ಹೊಂದಿರಬಾರದು.

**6. ಯೋಜನೆಯ ಸೌಲಭ್ಯಗಳು:**

ಈ ಯೋಜನೆಯಡಿ ನೋಂದಾಯಿತ ದಿನಪತ್ರಿಕೆ ವಿತರಿಸುವ ಕಾರ್ಮಿಕನು ಈ ಕೆಳಕಂಡ ಸೌಲಭ್ಯಗಳಿಗೆ ಅರ್ಹನಾಗುತ್ತಾನೆ.

**i. ಅಪಘಾತ ಪರಿಹಾರ ಸೌಲಭ್ಯ**

- ಮರಣ ಪ್ರಕರಣ _ ರೂ. 2.00 ಲಕ್ಷಗಳ ಅಪಘಾತ ಪರಿಹಾರ
- ಅಪಘಾತದಿಂದುಟಾಗುವ ಸಂಪೂರ್ಣ ಶಾಶ್ವತ/ಭಾಗಶಃ ದುರ್ಬಲತೆ ಪರಿಹಾರ (ಶೇಕಡವಾರು ದುರ್ಬಲತೆ ಆಧಾರದ ಮೇಲೆ) - ರೂ. 2 ಲಕ್ಷಗಳವರೆಗೆ ಪರಿಹಾರ
- ಆಸ್ಪತ್ರೆ ವೆಚ್ಚ ಮರುಪಾವತಿ - ರೂ. 1.00 ಲಕ್ಷದವರೆಗೆ.

**ವಿ.ಸೂ.: ಮೇಲ್ಕಂಡ ಎಲ್ಲಾ ಸೌಲಭ್ಯಗಳು "ಕರ್ತವ್ಯದಲ್ಲಿರುವಾಗ ಮತ್ತು ಕರ್ತವ್ಯದಲ್ಲಿ ಇರದೇ ಇದ್ದಾಗಲೂ ಸಂಭವಿಸುವ ಅಪಘಾತ" ಪ್ರಕರಣಗಳಿಗೆ ಅನ್ವಯಿಸುತ್ತವೆ.**

ii. **ವೈದ್ಯಕೀಯ ಸೌಲಭ್ಯ** - ಫಲಾನುಭವಿಯು ಪ್ರಕರಣ 4 (iii) ರಲ್ಲಿ ನಮೂದಿಸಲಾಗಿರುವ ಮಾರಣಾಂತಿಕ ಕಾಯಿಲೆ ಅಥವಾ ಗಂಭೀರ ಅನಾರೋಗ್ಯಕ್ಕೆ ತುತ್ತಾದಲ್ಲಿ ರೂ.1.00 ಲಕ್ಷದವರೆಗೆ ವೈದ್ಯಕೀಯ ಸೌಲಭ್ಯ.

**ವಿ.ಸೂ.: ಮೇಲಿನ 2 ಸೌಲಭ್ಯಗಳನ್ನು ಕ್ಲೇಮ್ ಮಾಡುವ ಸಂದರ್ಭದಲ್ಲಿ ಕಾರ್ಮಿಕನು ದಿನಪತ್ರಿಕೆ ವಿತರಿಸುವ ವೃತ್ತಿಯಲ್ಲಿ ಸಕ್ರಿಯನಾಗಿರಬೇಕು.**

**7. ಕ್ಲೇಮ್ ವಿಧಾನ:**

ಅರ್ಜಿದಾರ/ ಫಲಾನುಭವಿಯು ಅಪಘಾತ ಸಂಭವಿಸಿದ 1 ವರ್ಷದೊಳಗೆ ಹಾಗೂ ವೈದ್ಯಕೀಯ ಸೌಲಭ್ಯ ಪ್ರಕರಣಗಳಲ್ಲಿ ಆಸ್ಪತ್ರೆಗೆ ದಾಖಲಾದ 1 ವರ್ಷದೊಳಗೆ ನಿಗದಿತ ನಮೂನೆಯಲ್ಲಿ ಸೇವಾ ಸಿಂಧು ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸುವುದು.

i. **ಅಪಘಾತ ಪ್ರಕರಣಗಳಲ್ಲಿ ಈ ಕೆಳಕಂಡ ದಾಖಲೆಗಳನ್ನು ಸಲ್ಲಿಸುವುದು:**

1. ಇ-ಶ್ರಮ್ ಪೋರ್ಟಲ್‌ನಲ್ಲಿ ನೋಂದಾಯಿತ ಗುರುತಿನ ಚೀಟಿ,
2. ನಿಗದಿತ ನಮೂನೆಯಲ್ಲಿ ಉದ್ಯೋಗ ಪ್ರಮಾಣ ಪತ್ರ,
3. ಪ್ರಥಮ ವರ್ತಮಾನ ವರದಿ ಪ್ರತಿ,
4. ಮರಣ ಪ್ರಮಾಣ ಪತ್ರ, ಮರಣ ಪ್ರಕರಣಗಳಲ್ಲಿ
5. ಮರಣೋತ್ತರ ಪರೀಕ್ಷಾ ವರದಿ,
6. ಆಸ್ಪತ್ರೆಯ ಮೂಲ ಬಿಲ್‌ಗಳು, ಆಸ್ಪತ್ರೆ ವೆಚ್ಚ ಮರುಪಾವತಿ ಪ್ರಕರಣಗಳಲ್ಲಿ
7. ಮೂಲ ಡಿಸ್ಚಾರ್ಜ್ ಸಾರಾಂಶ,
8. ಸರ್ಕಾರಿ ವೈದ್ಯಕೀಯ ದುರ್ಬಲತೆ ಪ್ರಮಾಣ ಪತ್ರ (ದುರ್ಬಲತೆ ಪ್ರಕರಣಗಳಲ್ಲಿ),
9. ಕಂದಾಯ ಇಲಾಖೆಯ ವಂಶ ವೃಕ್ಷ ಪ್ರಮಾಣ ಪತ್ರ, (ಮರಣ ಪ್ರಕರಣಗಳಲ್ಲಿ ಮಾತ್ರ)
10. ಪಡಿತರ ಚೀಟಿ (ಲಭ್ಯವಿದ್ದಲ್ಲಿ),
11. ಫಲಾನುಭವಿಯ ಆಧಾರ್ ಕಾರ್ಡ್ ನ ಪ್ರತಿ,
12. ನಾಮನಿರ್ದೇಶಿತರ/ಫಲಾನುಭವಿಯ ಆಧಾರ್ ಕಾರ್ಡ್ ಹಾಗೂ ಬ್ಯಾಂಕ್ ಪಾಸ್ ಪುಸ್ತಕದ ಪ್ರತಿ,
13. ಅವಶ್ಯಕವಿರುವ ಇತರೆ ದಾಖಲೆಗಳು.

i. **ವೈದ್ಯಕೀಯ ಸೌಲಭ್ಯ ಪಡೆಯಲು ಸಲ್ಲಿಸಬೇಕಾದ ದಾಖಲೆಗಳು**:

1. ಇ-ಶ್ರಮ್ ಪೋರ್ಟಲ್‌ನಲ್ಲಿ ನೋಂದಾಯಿತ ಗುರುತಿನ ಚೀಟಿ,
2. ನಿಗದಿತ ನಮೂನೆಯಲ್ಲಿ ಉದ್ಯೋಗ ಪ್ರಮಾಣ ಪತ್ರ,

3. ನಿಗದಿಪಡಿಸಿದ ನಮೂನೆಯಲ್ಲಿ ಮಾಹಿತಿಯನ್ನು ಭರ್ತಿ ಮಾಡಿ ಸಂಬಂಧಪಟ್ಟ ವೈದ್ಯಾಧಿಕಾರಿಗಳಿಂದ ದೃಢೀಕರಣ ಪಡೆದು ಅರ್ಜಿ ಸಲ್ಲಿಸುವುದು.
4. ಮೂಲ ಡಿಸ್ಚಾರ್ಜ್ ಸಾರಾಂಶ,
5. ಆಸ್ಪತ್ರೆಯ ಮೂಲ ಬಿಲ್‌ಗಳು,
6. ಪಡಿತರ ಚೀಟಿ (ಲಭ್ಯವಿದ್ದಲ್ಲಿ),
7. ಆಧಾರ್ ಕಾರ್ಡ್ನ ಪ್ರತಿ,
8. ಬ್ಯಾಂಕ್ ಪಾಸ್‌ಬುಕ್ ಪ್ರತಿ.
9. ಅವಶ್ಯಕವಿರುವ ಇತರೆ ದಾಖಲೆಗಳು.

ii. ಫಲಾನುಭವಿ/ನಾಮನಿರ್ದೇಶಿತರಿಂದ ಸ್ವೀಕರಿಸಿದ ಕ್ಲೇಮ್ ಅರ್ಜಿಗಳನ್ನು ಕಾರ್ಮಿಕ ಅಧಿಕಾರಿಗಳು ಪರಿಶೀಲಿಸಿ ಮಂಡಳಿಗೆ ಸಲ್ಲಿಸುವುದು.

- ಅಪಘಾತ ಪರಿಹಾರಕ್ಕೆ ಸಂಬಂಧಿಸಿದಂತೆ ಫಲಾನುಭವಿಯು ಸಲ್ಲಿಸಿದ ಅರ್ಜಿಯ ಆಧಾರದ ಮೇಲೆ ಸ್ಥಳ ಪರಿಶೀಲನೆ ನಡೆಸಿ ನಿಗದಿತ ನಮೂನೆಯಲ್ಲಿ ಸೂಕ್ತ ಶಿಫಾರಸ್ಸಿನೊಂದಿಗೆ ಮಂಡಳಿಗೆ ಪರಿಶೀಲನಾ ವರದಿ ರವಾನಿಸುವುದು.
- ವೈದ್ಯಕೀಯ ಸೌಲಭ್ಯಕ್ಕೆ ಸಂಬಂಧಿಸಿದಂತೆ ಫಲಾನುಭವಿಯು ಸಲ್ಲಿಸಿದ ನಿಗದಿತ ನಮೂನೆಯನ್ನು ಪರಿಶೀಲಿಸಿ ಸೂಕ್ತ ಶಿಫಾರಸ್ಸಿನೊಂದಿಗೆ ಮಂಡಳಿಗೆ ರವಾನಿಸುವುದು.

iii. ಮಂಡಳಿಯು ಅರ್ಜಿದಾರರಿಂದ ಮೂಲ ವೈದ್ಯಕೀಯ ಬಿಲ್‌ಗಳನ್ನು ಪಡೆದು ಪರಿಶೀಲಿಸಿ **CGHS** ನಲ್ಲಿ ನಿಗದಿಪಡಿಸಿರುವ ದರದ ಆಧಾರದ ಮೇಲೆ ಗರಿಷ್ಠ ರೂ.1.00 ಲಕ್ಷದವರೆಗೆ ವೈದ್ಯಕೀಯ ವೆಚ್ಚ ಮರುಪಾವತಿಸುವುದು.

iv. ಎಲ್ಲಾ ಪರಿಹಾರ ಮೊತ್ತವನ್ನು ಫಲಾನುಭವಿ/ನಾಮನಿರ್ದೇಶಿತರ ಬ್ಯಾಂಕ್ ಖಾತೆಗೆ ನೇರವಾಗಿ **DBT/NEFT** ಮೂಲಕ ವರ್ಗಾವಣೆ ಮಾಡಲಾಗುವುದು.

v. ಫಲಾನುಭವಿಯು ಮರಣದ ಸಮಯದಲ್ಲಿ ಅವಿವಾಹಿತನಾಗಿದ್ದಲ್ಲಿ ತಾಯಿ ತಂದೆ ಹಾಗೂ ವಿವಾಹಿತನಾಗಿದ್ದಲ್ಲಿ ಹೆಂಡತಿ ಮತ್ತು ಮಕ್ಕಳು ಕಾನೂನುಬದ್ಧ ವಾರಸುದಾರರಾಗಿರುತ್ತಾರೆ.

**8. ಅಪವಾದ:**

ಈ ಕೆಳಗಿನ ಪ್ರಕರಣಗಳಲ್ಲಿ ಕ್ಲೇಮ್ ಅರ್ಜಿಯನ್ನು ಪರಿಗಣಿಸದೇ ಇರುವ ಅನರ್ಹತೆಗಳು:

1. ಆತ್ಮಹತ್ಯೆ,
2. ಒಂದು ವೇಳೆ ಫಲಾನುಭವಿಯು ಅಪಘಾತದ ವೇಳೆ ಮದ್ಯ ಅಥವಾ ಮಾದಕ ದ್ರವ್ಯ ಸೇವಿಸಿದಲ್ಲಿ,
3. ಫಲಾನುಭವಿಯ ಬುದ್ಧಿಭ್ರಮಣೆಯ ಕಾರಣ ಅಪಘಾತ ಸಂಭವಿಸಿದಲ್ಲಿ,
4. ಫಲಾನುಭವಿಯು ಅಪರಾಧದ ಉದ್ದೇಶದಿಂದ ಮಾಡಿದ ಯಾವುದಾದರೂ ಕಾನೂನು ಉಲ್ಲಂಘನೆಯ ಕಾರಣ ಅಪಘಾತ ಸಂಭವಿಸಿದಲ್ಲಿ,
5. ಯುದ್ಧ, ಆಕ್ರಮಣ, ವಿದೇಶಿ ವೈರಿಯ ಕೃತಿ, ದಂಗೆ, ಕ್ರಾಂತಿ, ಮಿಲಿಟರಿ ಅಥವಾ ಅಧಿಕಾರ ಕಿತ್ತುಕೊಳ್ಳುವುದು, ಹಿಡಿತ ಸೆರೆಹಿಡಿ, ಬಂಧನ ಇತ್ಯಾದಿಗಳ ಕಾರಣದಿಂದಾಗಿ ಸಂಭವಿಸಿದ ಅಪಘಾತ,

**9. ಯೋಜನೆಯ ಸಂಪನ್ಮೂಲ:**

ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ದಿನಪತ್ರಿಕೆ ವಿತರಿಸುವ ಕಾರ್ಮಿಕರಿಗೆ ಸೌಲಭ್ಯಗಳನ್ನು ವಿತರಿಸಲು ಯಾವುದಾದರೂ ಒಂದು ರಾಷ್ಟ್ರೀಕೃತ ಬ್ಯಾಂಕ್‌ನ ಶಾಖೆಯಲ್ಲಿ "ಕರ್ನಾಟಕ ರಾಜ್ಯ ದಿನಪತ್ರಿಕೆ ವಿತರಣಾ ಕಾರ್ಮಿಕರ ಅಪಘಾತ ಪರಿಹಾರ

ಮತ್ತು ವೈದ್ಯಕೀಯ ಸೌಲಭ್ಯ ಯೋಜನೆ"ಎಂಬ ಹೆಸರಿನ ಖಾತೆಯನ್ನು ತೆರೆಯುವ ಮೂಲಕ ಹಣಕಾಸು/ ನಿಧಿ ರಚಿಸಲು ಹಣಕಾಸಿನ ಮೂಲಗಳು ಈ ಕೆಳಗಿನಂತಿವೆ:

- ಯೋಜನೆಯ ಜಾರಿಗೆ ರಾಜ್ಯ ಸರ್ಕಾರವು ಹಂಚಿಕೆ ಮಾಡಿರುವ ಅನುದಾನ
- ಯೋಜನೆಯ ಜಾರಿಗೆ ಕೇಂದ್ರ ಸರ್ಕಾರದಿಂದ ಹಂಚಿಕೆಯಾದ ಅನುದಾನ (ರಾಜ್ಯ ಸರ್ಕಾರವು ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಕಾಯ್ದೆ, 2008 ರ ಕಲಂ 7(2) ಮತ್ತು (3)ರಡಿ ಕೇಂದ್ರ ಸರ್ಕಾರದಿಂದ ಸಹಾಯಧನ ಕೋರಬಹುದಾಗಿರುತ್ತದೆ.)
- ರಾಜ್ಯ ಸರ್ಕಾರ/ಕೇಂದ್ರ ಸರ್ಕಾರವು ಕಾಲಕಾಲಕ್ಕೆ ತನ್ನ ಅಧಿಕೃತ ರಾಜ್ಯ ಪತ್ರದಲ್ಲಿ ಅಧಿಸೂಚಿಸುವ ಸುಂಕ ಸಂಗ್ರಹಣೆ.
- ಸಿಎಸ್ಆರ್ ನಿಧಿಯು ಸೇರಿದಂತೆ ರಾಜ್ಯ ಸರ್ಕಾರದಿಂದ ಅಂಗೀಕೃತವಾದ ಯಾವುದೇ ಸಂಪನ್ಮೂಲ ಅಥವಾ ಇತರೆ ಮೂಲಗಳಿಂದ.

**10. ಯೋಜನೆಯ ಜಾರಿಗೊಳಿಸುವಿಕೆ:**

ಯೋಜನೆಯಡಿ ನಿಗದಿಪಡಿಸಿದ ಸೌಲಭ್ಯಗಳನ್ನು ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯಿಂದ ನೇರವಾಗಿ ವಿತರಿಸುವುದು.

**11. ಮಾಹಿತಿ, ಶಿಕ್ಷಣ ಮತ್ತು ಸಂವಹನ ಚಟುವಟಿಕೆಗಳು:**

ರಾಜ್ಯ ಮಂಡಳಿಯು ಉದ್ದೇಶಿತ ಸಮೂಹ ಹಾಗೂ ಸಮಾಜದ ಎಲ್ಲಾ ಜನರಲ್ಲಿ ಯೋಜನೆಯ ಬಗ್ಗೆ ಜಾಗೃತಿಯನ್ನು ಮೂಡಿಸುವ ಸಲುವಾಗಿ ಮಾಹಿತಿ, ಶಿಕ್ಷಣ ಹಾಗೂ ಸಂಪರ್ಕ ಕಾರ್ಯಚಟುವಟಿಕೆಗಳ ಸಾಂಪ್ರದಾಯಿಕ ಹಾಗೂ ಆಧುನಿಕ ಪದ್ಧತಿ/ವಿಧಾನಗಳ ಮೂಲಕ ಸಾಧ್ಯವಿರುವ ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳತಕ್ಕದ್ದು.

**12. ಆಡಳಿತ ನಿರ್ವಹಣೆ ಹಾಗೂ IEC ಚಟುವಟಿಕೆಗಳಿಗಾಗಿ ನಿಧಿ:**

ರಾಜ್ಯ ಸರ್ಕಾರದಿಂದ ಯೋಜನೆಯಡಿ ಹಂಚಿಕೆ ಮಾಡಿ ಬಿಡುಗಡೆಯಾದ ಒಟ್ಟು ಆಯವ್ಯಯದಲ್ಲಿ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಶೇ.10 ರಷ್ಟನ್ನು ಆಡಳಿತ ನಿರ್ವಹಣೆ ಹಾಗೂ IEC ಚಟುವಟಿಕೆಗಳಿಗಾಗಿ ಬಳಸಿಕೊಳ್ಳಬಹುದು.

**13. ಯೋಜನೆಯನ್ನು ಮಾರ್ಪಾಡು ಮಾಡುವ ಅಧಿಕಾರ:**

ದಿನಪತ್ರಿಕೆ ವಿತರಿಸುವ ಕಾರ್ಮಿಕರ ಹಿತದೃಷ್ಟಿಯಿಂದ ಯೋಜನೆಯ ಸಮರ್ಪಕ ಅನುಷ್ಠಾನಕ್ಕಾಗಿ ರಾಜ್ಯ ಸರ್ಕಾರವು ತನ್ನ ಅಧಿಕೃತ ಗೆಜೆಟ್‌ನಲ್ಲಿ ಅಧಿಸೂಚನೆಯನ್ನು ಹೊರಡಿಸುವುದರ ಮೂಲಕ ಯೋಜನೆಯನ್ನು ಮಾರ್ಪಾಡು ಮಾಡುವ ಹಾಗೂ ತಿದ್ದುಪಡಿ ಮಾಡುವ ಅಧಿಕಾರವನ್ನು ಹೊಂದಿರುತ್ತದೆ.

**14. ಅಡಚಣೆಗಳನ್ನು ನಿವಾರಿಸುವ ಅಧಿಕಾರ:**

ಈ ಯೋಜನೆಯ ಪ್ರಾವಧಾನಗಳನ್ನು ಕಾರ್ಯಗತಗೊಳಿಸುವಲ್ಲಿ ಏನಾದರೂ ಅಡಚಣೆ ಉಂಟಾದಲ್ಲಿ, ಅಂತಹ ಅಡಚಣೆಗಳನ್ನು ನಿವಾರಿಸಲು ರಾಜ್ಯ ಸರ್ಕಾರವು ಅಧಿಕೃತ ಗೆಜೆಟ್‌ನಲ್ಲಿ ಆದೇಶವನ್ನು ಹೊರಡಿಸುವ ಮೂಲಕ ಅವಶ್ಯಕ ನಿಯಮಗಳನ್ನು ರೂಪಿಸಬಹುದು.

**15. ಸೌಲಭ್ಯಗಳ ನಿರಾಕರಣೆ ಹಾಗೂ ದೂರು ನಿವಾರಣೆ:**

- ದಿನಪತ್ರಿಕೆ ವಿತರಿಸುವ ಕಾರ್ಮಿಕನು ಮರಣ/ಅಪಘಾತ ಸಂದರ್ಭದಲ್ಲಿ ದಿನಪತ್ರಿಕೆ ವಿತರಿಸುವ ವೃತ್ತಿಯಲ್ಲಿ ಸಕ್ರಿಯನಾಗಿರದ ಪ್ರಕರಣಗಳಲ್ಲಿ ಅನರ್ಹನಾಗುತ್ತಾನೆ.
- ದೂರು ನಿವಾರಣಾಧಿಕಾರಿ ಅಂದರೆ ಮಂಡಳಿಯ ಜಂಟಿ ಕಾರ್ಯದರ್ಶಿಯವರು ಇವರಿಗೆ ಸಲ್ಲಿಸಿದ ದೂರನ್ನು 30 ದಿನಗಳೊಳಗೆ ಲಿಖಿತ ಆದೇಶದ ಮೂಲಕ ವಿಲೇವಾರಿ ಮಾಡುವುದು ಹಾಗೂ ಅವರ ನಿರ್ಣಯವು ಅಂತಿಮವಾಗಿರುತ್ತದೆ.

******